**All India Radio: Bangalore**
**National Bulletin In Kannada**
**01.04.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**01.04.2026 1.10 p.m..**

**<><><><>**

ಮುಖ್ಯಾಂಶಗಳು

1. ಶಿಕ್ಷಣವೇ ವಿಕಾಸದ ಅಡಿಪಾಯ; ತುಮಕೂರಿನಲ್ಲಿ ಡಾ. ಶಿವಕುಮಾರ ಸ್ವಾಮಿಜೀಗಳ ಜಯಂತ್ಯೋತ್ಸವದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅಭಿಮತ
2. ಜಾಗತಿಕ ವಿಮಾನ ಇಂಧನ ದರದ ಏರಿಕೆ ನಡುವೆ ದೇಶೀಯ ವಿಮಾನ ಪ್ರಯಾಣ ದರ ಸ್ಥಿರ - ಕೇಂದ್ರ ಸರ್ಕಾರ ನಿರ್ಧಾರ
3. ಸಂವಿಧಾನ ಸದನದಲ್ಲಿರುವ ೫೮ ಭಿತ್ತಿಚಿತ್ರಗಳು ದೇಶದ ನಾಗರಿಕತೆಯ ಪಯಣದ ದೃಶ್ಯರೂಪಗಳು - ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್
4. ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿ; ಇಂದು ಲಕ್ನೋ ಸೂಪರ್ ಜೈಂಟ್ಸ್ -ದೆಹಲಿ ಕ್ಯಾಪಿಟಲ್ಸ್ ಮುಖಾಮುಖಿ

<><><><>

ಶಿಕ್ಷಣವೇ ವಿಕಾಸದ ಅಡಿಪಾಯವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ಕರ್ನಾಟಕದ ತುಮಕೂರಿನ ಸಿದ್ಧಗಂಗಾ ಮಠದಲ್ಲಿಂದು ನಡೆಯುತ್ತಿರುವ ಡಾ.ಶಿವಕುಮಾರ ಸ್ವಾಮೀಜಿಗಳ ೧೧೯ನೇ ಜಯಂತಿ ಹಾಗೂ ಗುರುವಂದನಾ ಸಮಾರಂಭದಲ್ಲಿ ಪಾಲ್ಗೊಂಡು, ಈ ವೇಳೆ ಮಾತನಾಡಿದ ಅವರು, ದೇಶದ ಉತ್ತಮ ಭವಿಷ್ಯವನ್ನು ಖಚಿತಪಡಿಸಿಕೊಳ್ಳಲು ಶಿಕ್ಷಣ ಮತ್ತು ವ್ಯಕ್ತಿತ್ವ ವಿಕಸನ ಪ್ರಮುಖ ಪಾತ್ರ ವಹಿಸುತ್ತದೆ. ಈ ಸಂಸ್ಥೆ ಕೇವಲ ಒಂದು ಧಾರ್ಮಿಕ ಸಂಸ್ಥೆಯಾಗಿರದೆ, ದೇಶದ ಸಾಮೂಹಿಕ ಬೆಳವಣಿಗೆಗೆ ನೆರವಾಗಲು ಸದಾ ಸಿದ್ಧವಿರುವ ಸಂಸ್ಥೆಯಾಗಿದೆ ಎಂದರು. ಈ ಸಂಸ್ಥೆಯಿಂದ ಸ್ಥಾಪಿಸಲಾಗಿರುವ ಸಿದ್ದಗಂಗಾ ಆಸ್ಪತ್ರೆಯ ಮೂಲಕ ಜನಸಾಮಾನ್ಯರಿಗೆ ಉತ್ಕೃಷ್ಟ ಆರೋಗ್ಯ ಸೇವೆಗಳನ್ನು ಒದಗಿಸಲಾಗುತ್ತಿದೆ. ಆ ಮೂಲಕ ಸಿದ್ದಗಂಗಾ ಮಠ ಅನ್ನಗಂಗಾ, ಕರುಣಾಗಂಗಾ ಮತ್ತು ಶಿಕ್ಷಣಗಂಗಾ ಎಂಬ ಪರಂಪರೆಗಳನ್ನು ಮುನ್ನಡೆಸಿಕೊಂಡು ಹೋಗುತ್ತಿದೆ ಎಂದು ರಾಷ್ಟ್ರಪತಿ ಬಣ್ಣಿಸಿದರು.

ಧ್ವನಿ : ರಾಷ್ಟ್ರಪತಿ ದ್ರೌಪದಿ ಮುರ್ಮು (೪೮ ಸೆಕೆಂಡ್‌ಗಳು)

ಕಾರ್ಯಕ್ರಮದಲ್ಲಿ ಕೇಂದ್ರ ಸಚಿವರಾದ ಪ್ರಲ್ಹಾದ್ ಜೋಶಿ, ವಿ. ಸೋಮಣ್ಣ, ಸಚಿವರಾದ ಡಾ. ಜಿ. ಪರಮೇಶ್ವರ್, ಲಕ್ಷ್ಮೀ ಹೆಬ್ಬಾಳ್ಕರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ರಾಷ್ಟ್ರಪತಿ ಭೇಟಿ ಹಿನ್ನೆಲೆಯಲ್ಲಿ ತುಮಕೂರಿನಲ್ಲಿ ಬಿಗಿಭದ್ರತೆ ಏರ್ಪಡಿಸಲಾಗಿದ್ದು, ೧೫ ಸಾವಿರ ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗಿದೆ. ನಿನ್ನೆ ರಾತ್ರಿ ಬೆಂಗಳೂರಿಗೆ ಆಗಮಿಸಿದ ಅವರನ್ನು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಬರಮಾಡಿಕೊಂಡರು. ತುಮಕೂರಿನ ಸಿದ್ಧಗಂಗಾ ಮಠದ ಡಾ. ಶಿವಕುಮಾರ ಸ್ವಾಮೀಜಿಗಳ ೧೧೯ನೇ ಜಯಂತಿ ಹಿನ್ನೆಲೆ ಪ್ರಧಾನಮಂತ್ರಿ ನರೇಂದ್ರ ಮೋದಿ, ಗೌರವ ಪೂರ್ಣ ನಮನಗಳನ್ನು ಸಲ್ಲಿಸಿದ್ದಾರೆ. ಶಿಕ್ಷಣ, ಸಮಾಜಕಲ್ಯಾಣ ಮತ್ತು ಆಧ್ಯಾತ್ಮಿಕ ಕ್ಷೇತ್ರಗಳಲ್ಲಿ ಅವರ ಕೊಡುಗೆಗಳು ಸಮಾಜದ ಮೇಲೆ ಶಾಶ್ವತ ಛಾಪನ್ನು ಮೂಡಿಸಿದೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

<><><><>

ಜಾಗತಿಕ ಮಟ್ಟದಲ್ಲಿ ವಿಮಾನ ಇಂಧನ ಬೆಲೆ ಏರಿಕೆಯಾಗುತ್ತಿದ್ದರೂ ದೇಶೀಯ ವಿಮಾನ ಪ್ರಯಾಣಿಕರಿಗೆ ಹೊರೆಯಾಗದಂತೆ ಕೇಂದ್ರ ಸರ್ಕಾರ ಮಹತ್ವದ ಕ್ರಮ ಕೈಗೊಂಡಿದೆ. ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿನ ಏರಿಳಿತಗಳಿಂದಾಗಿ ಇಂದಿನಿಂದ ವಿಮಾನ ಇಂಧನ ದರ ಶೇಕಡ ೧೦೦ಕ್ಕಿಂತ ಅಧಿಕ ಏರಿಕೆಯಾಗುವ ಸಾಧ್ಯತೆ ಇತ್ತು, ದೇಶೀಯ ವಿಮಾನಯಾನ ವಲಯವನ್ನು ರಕ್ಷಿಸುವ ಉದ್ದೇಶದಿಂದ ಸಾರ್ವಜನಿಕ ವಲಯದ ತೈಲ ಮಾರಾಟ ಸಂಸ್ಥೆಗಳು, ನಾಗರಿಕ ವಿಮಾನಯಾನ ಸಚಿವಾಲಯದೊಂದಿಗೆ ಸಮಾಲೋಚಿಸಿ, ಸ್ವಲ್ಪ ಮಟ್ಟಿಗೆ ದರ ಏರಿಕೆಯನ್ನು ಜಾರಿಗೆ ತಂದಿದೆ. ಇದರನ್ವಯ ದೇಶೀಯ ವಿಮಾನಯಾನ ಸಂಸ್ಥೆಗಳಿಗೆ ಪ್ರತಿ ಲೀಟರ್‌ಗೆ ಸುಮಾರು ೧೫ ರೂಪಾಯಿ ಅಂದರೆ ಶೇಕಡ ೨೫ರಷ್ಟು ಮಾತ್ರ ದರ ಏರಿಕೆಯಾಗಲಿದೆ. ಆದರೆ ಅಂತಾರಾಷ್ಟ್ರೀಯ ಮಾರ್ಗಗಳಲ್ಲಿ ಸಂಚರಿಸುವ ವಿಮಾನಗಳಿಗೆ ಜಾಗತಿಕ ಮಾರುಕಟ್ಟೆ ದರಕ್ಕೆ ಅನುಗುಣವಾಗಿ ಪೂರ್ಣ ಪ್ರಮಾಣದ ಬೆಲೆ ಏರಿಕೆ ಅನ್ವಯವಾಗಲಿದೆ. ಈ ಕುರಿತು ಪ್ರತಿಕ್ರಿಯಿಸಿರುವ ಕೇಂದ್ರ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು, ಸರ್ಕಾರದ ಈ ನಿರ್ಧಾರ ಪ್ರಯಾಣಿಕರನ್ನು ತೀವ್ರ ದರ ಏರಿಕೆಯಿಂದ ರಕ್ಷಿಸಲಿದ್ದು, ವಿಮಾನಯಾನ ಕ್ಷೇತ್ರದ

ಸ್ಥಿರತೆಗೆ ಬೆಂಬಲ ನೀಡಲಿದೆ ಎಂದಿದ್ದಾರೆ. ಇದು ಸರಕು ಸಾಗಾಣೆ ಮತ್ತು ವ್ಯಾಪಾರ ವಹಿವಾಟು ಸುಗಮವಾಗಿ ನಡೆಯಲು ಸಹಕಾರಿಯಾಗಲಿದೆ.

<><><>

ಸಂವಿಧಾನ ಸದನದಲ್ಲಿರುವ ೫೮ ಭಿತ್ತಿಚಿತ್ರಗಳು ಕೇವಲ ಕಲಾಕೃತಿಗಳಲ್ಲ ಬದಲಿಗೆ ಭಾರತದ ನಾಗರಿಕತೆಯ ಪಯಣದ ದೃಶ್ಯರೂಪಗಳಾಗಿವೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ರಾಜ್ಯಸಭಾ ಸಂಸದೆ ಸುಧಾಮೂರ್ತಿ ಅವರು ರಚಿಸಿರುವ ಟೈಡ್ಸ್ ಆಫ್ ಟೈಮ್ ಪುಸ್ತಕವನ್ನು ಬಿಡುಗಡೆ ಮಾಡಿ, ಮಾತನಾಡಿದ ಅವರು, ಈ ಪುಸ್ತಕ ಸಂಸತ್ತಿನ ಭಿತ್ತಿಚಿತ್ರಗಳ ಕಾಲಾತೀತ ಸೌಂದರ್ಯವನ್ನು ಪರಿಣಾಮಕಾರಿಯಾಗಿ ಸೆರೆಹಿಡಿದಿದೆ ಎಂದರು. ಪ್ರಜಾಪ್ರಭುತ್ವ ಪಶ್ಚಿಮದಿಂದ ಬಂದ ಆಧುನಿಕ ವ್ಯವಸ್ಥೆಯೆಂದು ಸಾಮಾನ್ಯವಾಗಿ ಭಾವಿಸಲಾಗುತ್ತದೆ. ಆದರೆ ಭಾರತದ ಪ್ರಾಚೀನ ಗ್ರಂಥಗಳು, ಪ್ರಜಾಪ್ರಭುತ್ವದ ಪರಿಕಲ್ಪನೆ, ನಮ್ಮ ದೇಶಕ್ಕೆ ಹೊಸತಲ್ಲ ಎಂಬುದಕ್ಕೆ ಸಾಕ್ಷ್ಯ ನೀಡುತ್ತವೆ. ಸಂವಾದ, ಚರ್ಚೆ, ಭಿನ್ನಾಭಿಪ್ರಾಯ ಮತ್ತು ಸಮಾಲೋಚನೆಗಳು ಸದೃಢ ಪ್ರಜಾಪ್ರಭುತ್ವದ ಸಾಧನಗಳಾಗಿದ್ದು, ಸಂಸತ್ತು ಇವುಗಳ ಜೀವಂತ ಸಂಕೇತವಾಗಿದೆ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಮಾತನಾಡಿದ ಲೋಕಸಭಾಧ್ಯಕ್ಷ ಓಂ ಬಿರ್ಲಾ, ಸಂಸತ್ತು ಕೇವಲ ಚರ್ಚೆ ಮತ್ತು ಸಂವಾದದ ವೇದಿಕೆಯಲ್ಲ, ಬದಲಿಗೆ ಮುಂದಿನ ಪೀಳಿಗೆಗಳಿಗೆ ಪ್ರೇರಣೆ ನೀಡುವ ಕೇಂದ್ರವೂ ಆಗಿದೆ ಎಂದು ತಿಳಿಸಿದರು.

<><><>

ಪಶ್ಚಿಮ ಏಷ್ಯಾದಲ್ಲಿನ ಸಂಘರ್ಷದ ಹಿನ್ನೆಲೆ ತೈಲ ಮಾರಾಟ ಸಂಸ್ಥೆಗಳು, ದೇಶದ ಪ್ರಮುಖ ನಗರಗಳಲ್ಲಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆಯಲ್ಲಿ ೧೯೫ ರೂಪಾಯಿ ೫೦ ಪೈಸೆ ಹೆಚ್ಚಳ ಮಾಡಿದೆ. ಇಂಡಿಯನ್ ಆಯಿಲ್ ಕಾರ್ಪೋರೇಷನ್ ಜಾಲತಾಣದಲ್ಲಿನ ಮಾಹಿತಿ ಪ್ರಕಾರ ದೆಹಲಿಯಲ್ಲಿ ೧೯ ಕೆ.ಜಿ. ತೂಕದ ವಾಣಿಜ್ಯ ಸಿಲಿಂಡರ್ ಬೆಲೆ ಈಗ ೨ ಸಾವಿರದ ೭೮ ರೂಪಾಯಿ ೫೦ ಪೈಸೆಗಳಿಗೆ ಏರಿಕೆಯಾಗಿದ್ದರೆ, ಕೋಲ್ಕತ್ತಾದಲ್ಲಿ ೨ ಸಾವಿರದ ೨೦೮ ರೂಪಾಯಿ, ಮುಂಬೈನಲ್ಲಿ ೨ ಸಾವಿರದ ೩೧ ರೂಪಾಯಿ ಹಾಗೂ ಚೆನ್ನನಲ್ಲಿ ೨ ಸಾವಿರದ ೨೪೬ ರೂಪಾಯಿಗೆ ಏರಿಕೆಯಾಗಿದೆ. ಹೊಸ ದರಗಳು ಇಂದಿನಿಂದಲೇ ಜಾರಿಗೆ ಬಂದಿವೆ. ಈ ನಡುವೆ, ಮನೆ ಬಳಕೆಯ ಎಲ್‌ಪಿಜಿ ಸಿಲಿಂಡರ್‌ಗಳಲ್ಲಿ ಯಾವುದೇ ಬದಲಾವಣೆ ಮಾಡಲಾಗಿಲ್ಲ.

<><><>

ಇಂದಿನಿಂದ ಹೊಸ ಹಣಕಾಸು ವರ್ಷ ಆರಂಭವಾಗಿದ್ದು, ಪ್ರಮುಖ ಆರ್ಥಿಕ ಬದಲಾವಣೆಗಳು ಜಾರಿಗೆ ಬಂದಿವೆ. ಆರು ದಶಕಗಳ ಹಳೆಯ ಆದಾಯ ತೆರಿಗೆ ಕಾಯ್ದೆಯ ಬದಲಿಗೆ ಹೊಸ ಆದಾಯ ತೆರಿಗೆ ಕಾಯ್ದೆ-೨೦೨೫ ಜಾರಿಗೆ ಬರಲಿದ್ದು, ಇದು ತೆರಿಗೆ ವ್ಯವಸ್ಥೆಯನ್ನು ಸರಳಗೊಳಿಸಲಿದೆ. ಭಾರತೀಯ ರಿಸರ್ವ್ ಬ್ಯಾಂಕ್ ನಿರ್ದೇಶನದಂತೆ ಎಲ್ಲಾ ಡಿಜಿಟಲ್ ಪಾವತಿ ವಹಿವಾಟುಗಳಿಗೆ ಎರಡು ಬಾರಿ ದೃಢೀಕರಣ ಇಂದಿನಿಂದ ಕಡ್ಡಾಯವಾಗಲಿದೆ. ಇದರ ಜೊತೆಗೆ ೨೦೨೬-೨೭ನೇ ಸಾಲಿನ ಪರಿಷ್ಕೃತ ಫಾಸ್ಟ್ಯಾಗ್ ವಾರ್ಷಿಕ ಪಾಸ್ ಶುಲ್ಕ ಕೂಡ ಇಂದಿನಿಂದ ಜಾರಿಯಾಗಲಿದ್ದು, ಪ್ಯಾನ್ ಕಾರ್ಡ್ ಅರ್ಜಿ ಸಲ್ಲಿಕೆಯ ಹೊಸ ನಿಮಯಗಳು ಸಹ ಇಂದಿನಿಂದ ಜಾರಿಗೆ ಬರಲಿವೆ.

<><><><>

ವಿಶ್ವದ ಅತಿದೊಡ್ಡ ಜನಗಣತಿ ಪ್ರಕ್ರಿಯೆ ಎನಿಸಿಕೊಂಡಿರುವ ಭಾರತದ ಜನಗಣತಿ-೨೦೨೭ರ ಮೊದಲ ಹಂತ ಇಂದಿನಿಂದ ಆರಂಭವಾಗಿದೆ. ಇದೇ ಮೊದಲ ಬಾರಿಗೆ ಸಂಪೂರ್ಣ ಡಿಜಿಟಲ್ ರೂಪದಲ್ಲಿ ನಡೆಯುತ್ತಿರುವ ಈ ಗಣತಿಯಲ್ಲಿ ನಾಗರಿಕರಿಗೆ ಸ್ವಯಂ ಗಣತಿ ಆಯ್ಕೆಯನ್ನು ನೀಡಲಾಗಿದೆ. ಈ ತಿಂಗಳ ೧೫ರ ವರೆಗೆ ಸ್ವಯಂಗಣತಿ ನಡೆಯಲಿದ್ದು, ಕರ್ನಾಟಕ, ಗೋವಾ, ಒಡಿಶಾ, ಸಿಕ್ಕಿಂ, ಮಿಜೋರಾಂ ಸೇರಿದಂತೆ ರಾಜ್ಯ ಹಾಗೂ ವಿವಿಧ ಕೇಂದ್ರಾಡಳಿತ ಪ್ರದೇಶಗಳಲ್ಲಿ ಇದೇ ೧೬ರಿಂದ ಮೇ ೧೫ರ ವರೆಗೆ ಮನೆಗಳ ಪಟ್ಟಿ ತಯಾರಿಕೆ ಮತ್ತು ಗಣತಿ ಕಾರ್ಯ ನಡೆಯಲಿದೆ.

<><><><>

ಒಡಿಶಾ ರಾಜ್ಯ ರಚನೆಯಾದ ದಿನದ ಸ್ಮರಣಾರ್ಥ ಇಂದು ಆಚರಿಸಲಾಗುವ ಒಡಿಶಾ ದಿನ ಅಂಗವಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಹಲವು ಗಣ್ಯರು ಶುಭಾಶಯ ಕೋರಿದ್ದಾರೆ. ತಮ್ಮ ಸಂದೇಶದಲ್ಲಿ ರಾಷ್ಟ್ರಪತಿ, ಈ ದಿನ ಒಡಿಶಾದ ಶ್ರೀಮಂತ ಸಾಂಸ್ಕೃತಿಕ ಪರಂಪರೆ, ಕಾಲಾತೀತ ಸಂಪ್ರದಾಯ ಮತ್ತು ಜನರ ದೃಢತೆಯನ್ನು ಸಂಭ್ರಮಿಸುವ ದಿನವಾಗಿದೆ ಎಂದಿದ್ದಾರೆ. ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ತಮ್ಮ ಸಂದೇಶದಲ್ಲಿ, ಒಡಿಶಾ ಶಾಂತಿ, ಸಮೃದ್ಧಿ ಮತ್ತು ಪ್ರಗತಿಯ ಹಾದಿಯಲ್ಲಿ ಮುನ್ನಡೆಯಲಿ ವಿಕಸಿತ ಭಾರತದ ಕನಸಿಗೆ ಗಮನಾರ್ಹ ಕೊಡುಗೆ ನೀಡಲಿ ಎಂದು ಹಾರೈಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ, ಒಡಿಶಾದ ಸಂಗೀತ, ಕಲೆ ಮತ್ತು ಸಾಹಿತ್ಯ, ಭಾರತದ ಸಂಸ್ಕೃತಿಯನ್ನು ಶ್ರೀಮಂತಗೊಳಿಸಿದೆ ಎಂದಿದ್ದಾರೆ.

<><><><>

ಒಡಿಶಾ ವಿಧಾನಸಭೆಯ ಬಜೆಟ್ ಅಧಿವೇಶನ ನಿಗದಿತ ಅವಧಿಗಿಂತ ೫ ದಿನ ಮುಂಚಿತವಾಗಿ ಅನಿರ್ದಿಷ್ಟಾವಧಿಗೆ ಮುಂದೂಡಲ್ಪಟ್ಟಿದೆ.

<><><><>

ಲಖನೌನ ಅಟಲ್ ಬಿಹಾರಿ ವಾಜಪೇಯಿ ಏಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ತಂಡವು ದೆಹಲಿ ಕ್ಯಾಪಿಟಲ್ಸ್ ತಂಡವನ್ನು ಎದುರಿಸಲಿದೆ. ಪಂದ್ಯವು ರಾತ್ರಿ ೭:೩೦ಕ್ಕೆ ಪ್ರಾರಂಭವಾಗಲಿದೆ. ನವಚಂಡಿಗಢದಲ್ಲಿನ ಮಹಾರಾಜ ಯದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ತಂಡ ಮೂರು ವಿಕೆಟ್‌ಗಳಿಂದ ಗೆಲುವು ದಾಖಲಿಸಿತು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>